# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 2021 |
| ಸದಸ್ಯರ ಹೆಸರು | ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 24.03.2021 |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಾರವಾರ ಜಿಲ್ಲೆಯ ಹಳಿಯಾಳ ತಾಲ್ಲೂಕಿನ ಡೊಮಗೇರಾ ಗ್ರಾಮವನ್ನು ದಾಂಡೇಲಿ ತಾಲ್ಲೂಕಿಗೆ ಸೇರ್ಪಡೆಗೊಳಿಸಬಾರದೆಂದು ಆಗ್ರಹಿಸಿ ಗ್ರಾಮಸ್ಥರು ಪ್ರತಿಭಟನೆ ಮಾಡುತ್ತಿದ್ದು ಎಲ್ಲಾ ಅಧಿಕಾರಿಗಳಿಗೆ ಪತ್ರದ ಮುಖಾಂತರ ವಿನಂತಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು) | ಉತ್ತರ ಕನ್ನಡ ಜಿಲ್ಲೆಯ ಹಳಿಯಾಳ ಮತ್ತು ಜೋಯಿಡಾ ತಾಲ್ಲೂಕುಗಳನ್ನು ವಿಭಜಿಸಿ ದಿನಾಂಕ: 27-01-2018 ರ ಸರ್ಕಾರದ ಅಧಿಸೂಚನೆಯಲ್ಲಿ ನೂತನ ದಾಂಡೇಲಿ ತಾಲ್ಲೂಕನ್ನು ರಚಿಸಿದ್ದು, ಪ್ರಸ್ತಾಪಿತ ಡೋಮಗೇರಾ ಗ್ರಾಮವನ್ನು ದಾಂಡೇಲಿ ತಾಲ್ಲೂಕಿಗೆ ಸೇರ್ಪಡೆಗೊಳಿಸಲಾಗಿದೆ.<br>ಡೋಮಗೇರಾ ಗ್ರಾಮದ ಗ್ರಾಮಸ್ಥರು ಡೋಮಗೇರಾ ಗ್ರಾಮವನ್ನು ದಾಂಡೇಲಿ ತಾಲ್ಲೂಕಿಗೆ ಸೇರ್ಪಡೆಗೊಳಿಸಬಾರದೆಂದು ಆಗ್ರಹಿಸಿ ದಿನಾಂಕ:27-01-2021 ರಂದು ಜಿಲ್ಲಾಧಿಕಾರಿ, ಉತ್ತರ ಕನ್ನಡ ಜಿಲ್ಲೆ ಇವರಿಗೆ ಮನವಿ ಸಲ್ಲಿಸಿರುತ್ತಾರೆ. ಅದರಂತೆ ಈ ಗ್ರಾಮವನ್ನು ದಾಂಡೇಲಿ ತಾಲ್ಲೂಕಿಗೆ ಸೇರ್ಪಡೆ ಮಾಡಿರುವುದರಿಂದ ಆಗುತ್ತಿರುವ ತೊಂದರೆಗಳ ಬಗ್ಗೆ ಕೂಲಂಕಷವಾಗಿ ಪರಿಶೀಲಿಸಲಾಗುತ್ತಿದೆ. |
| ಆ) | ಡೋಮಗೇರಾ ಗ್ರಾಮದ ವಿದ್ಯಾರ್ಥಿಗಳ ವಿದ್ಯಾಭ್ಯಾಸದ ಹಿತದೃಷ್ಟಿಯಿಂದ, ಸದರಿ ಗ್ರಾಮವನ್ನು ಹಳಿಯಾಳ ತಾಲ್ಲೂಕಿನಲ್ಲಿಯೇ ಇರಲು ಕ್ರಮ ಕೈಗೊಳ್ಳಲಾಗುವುದು? | ಡೋಮಗೇರಾ ಗ್ರಾಮದ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ಯಾವುದೇ ಸಮಸ್ಯೆ ಉಂಟಾಗದಂತೆ ಜಿಲ್ಲಾಡಳಿತದಿಂದ ಕ್ರಮ ವಹಿಸಲಾಗುತ್ತಿದೆ. |

**ಸಂಖ್ಯೆ: ಕಂಇ 30 ಎಲ್. ಆರ್.ಡಿ 2021**

(ಆರ್.ಅಶೋಕ್)
ಕಂದಾಯ ಸಚಿವರು